ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ: .ಸಿ7(8)ಆರ್.ಟಿ.ಇ/ಪ್ರ ಪ್ರ/2017-18. ದಿನಾಂಕ: 28.05.2018

**"ಅತೀ ಜರೂರು"**

**: : ಸುತ್ತೋಲೆ : :**

ವಿಷಯ:- 2018-19ನೇ ಸಾಲಿನಿಂದ ಶಿಕ್ಷಣ ಹಕ್ಕು ಕಾಯಿದೆ ಅಡಿ 12(1)(ಸಿ) ಅಡಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯಪುಸ್ತಕಗಳನ್ನು ಒದಗಿಸುವ ಬಗ್ಗೆ.

ಉಲ್ಲೇಖ:- (1) ಸರ್ಕಾರದ ಆದೇಶ ಸಂಖ್ಯೆ:ಇಡಿ 04 ಮಾಹಿತಿ 2017 ದಿ:03-03-2017.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1)ರ ಸರ್ಕಾರಿ ಆದೇಶದಂತೆ ಶಿಕ್ಷಣ ಹಕ್ಕು ಕಾಯಿದೆ ಅಡಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಶಾಲೆಗಳಲ್ಲಿ ದಾಖಲಾದ ವಿದ್ಯಾರ್ಥಿಗಳಿಗೆ ಉಚಿತವಾಗಿ ಕರ್ನಾಟಕ ಪಠ್ಯಪುಸ್ತಕ ಸಂಘದಿಂದ 2017-18ನೇ ಸಾಲಿನಿಂದ ಉಚಿತವಾಗಿ ಪಠ್ಯಪುಸ್ತಕಗಳನ್ನು ಸರಬರಾಜು ಮಾಡಲು ಆದೇಶಿಸಲಾಗಿರುತ್ತದೆ.

ಕರ್ನಾಟಕರಾಜ್ಯದಲ್ಲಿ 2012-13ನೇ ಸಾಲಿನಿಂದ ಶಿಕ್ಷಣ ಹಕ್ಕು ಕಾಯ್ದೆಯಡಿ ಸೆಕ್ಷನ್ 12(1)(ಸಿ)ಅಡಿ ದಾಖಲಾತಿ ಮಾಡಲಾಗುತ್ತಿದೆ. 2018-19ನೇ ಸಾಲಿನಲ್ಲಿ ಪ್ರಾಥಮಿಕ 1ನೇ ತರಗತಿಯಿಂದ 7ನೇ ತರಗತಿವರೆಗೆ ಮುಂದುವರೆದ ತರಗತಿಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುತ್ತಾರೆ.

2018-19ನೇ ಸಾಲಿನ ಪಠ್ಯಪುಸ್ತಕಗಳ ಬೇಡಿಕೆಯನ್ನು ಈಗಾಗಲೇ ಶಾಲೆಗಳಿಂದ ಮಾಹಿತಿ ಪಡೆದು ತಾಲ್ಲೂಕುವಾರು ಬೇಡಿಕೆಯನ್ನು ಸಲ್ಲಿಸಲಾಗುತ್ತದೆ. ಖಾಸಗಿ ಅನುದಾನರಹಿತ ಶಾಲೆಗಳಲ್ಲಿ ಆರ್.ಟಿ.ಇ ಅಡಿ ದಾಖಲಾತಿಯಾಗಿರುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶೀರ್ಷಿಕೆವಾರು ಪಠ್ಯಪುಸ್ತಕಗಳ ಮೇಲೆ ನಮೂದಿಸಿರುವ ಮೊತ್ತವನ್ನು ಅಳಿಸಿ **"ಆರ್.ಟಿ.ಇ. ಮಕ್ಕಳಿಗೆ ಉಚಿತ ಸರಬರಾಜು ಬೇಡಿಕೆ"** ಎಂದು ಮುದ್ರೆಯನ್ನು ಹಾಕಿ ಶಾಲೆಗಳಿಗೆ ಸರಬರಾಜು ಮಾಡುವುದು. ಈ ರೀತಿ ಸರಬರಾಜು ಮಾಡಿರುವ ಒಟ್ಟು ಪಠ್ಯಪುಸ್ತಕಗಳ ದರವನ್ನು ಶಾಲಾವಾರು ನಮೂದಿಸಿ ಉಪನಿರ್ದೇಶಕರು(ಆಡಳಿತ) ಇವರಿಗೆ ಸಲ್ಲಿಸುವುದು. ಉಪನಿರ್ದೇಶಕರು(ಆಡಳಿತ ಇವರು ಜಿಲ್ಲೆಯ ಒಟ್ಟು ಪಠ್ಯ ಪುಸ್ತಕಗಳ ಮೊತ್ತದ ವಿವರವನ್ನು ಕರ್ನಾಟಕ ಪಠ್ಯ ಪುಸ್ತಕ ಸಂಘಕ್ಕೆ ಸಲ್ಲಿಸಿ, ಆರ್.ಟಿ.ಇ. ಅಡಿ ಸರಬರಾಜು ಆಗಿರುವ ಒಟ್ಟು ಪಠ್ಯಪುಸ್ತಕಗಳು ಮತ್ತು ಒಟ್ಟು ಮೊತ್ತದ ಲೆಕ್ಕ ಹೊಂದಾಣಿಕೆ ಮಾಡಿಕೊಳ್ಳುವುದು ಮಾಹಿತಿಯನ್ನು ಆಯುಕ್ತಾಲಯಕ್ಕೆ ಒದಗಿಸುವುದು.

ವಿದ್ಯಾರ್ಥಿಗಳ ಸಂಖ್ಯೆ ಶುಲ್ಕ ಮರುಪಾವತಿ ತಂತ್ರಾಂಶದಲ್ಲಿ ಆನ್ ಲೈನ್ ಮುಖಾಂತರ ನಮೂದಿಸಲಾಗಿರುವ ಮತ್ತು 2018-19ನೇ ಸಾಲಿನ ದಾಖಲಾತಿಗೆ ತಾಳೆ ಹೊಂದಬೇಕು. ವಿದ್ಯಾರ್ಥಿಗಳ ಸಂಖ್ಯೆಗೆ ಮತ್ತು ಪಠ್ಯ ಪುಸ್ತಕ ಸರಬರಾಜು ಮಾಡುವ ಬಗ್ಗೆ ಯಾವುದೇ ದೂರುಗಳು ಬಂದಲ್ಲಿ ಆಯಾ ವ್ಯಾಪ್ತಿಯ ಉಪನಿರ್ದೇಶಕರು(ಆಡಳಿತ), ಹಾಗೂ ಆಯಾ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿಸುವುದು.

ಶಿಕ್ಷಣ ಹಕ್ಕು ಕಾಯ್ದೆ ಅಡಿ ದಾಖಲಾದ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ ಉಲ್ಲೇಖ(1)ರ ಸರ್ಕಾರದ ಆದೇಶದಂತೆ ಉಚಿತವಾಗಿ ಪಠ್ಯಪುಸ್ತಕಗಳನ್ನು ನೀಡಬೇಕಾಗಿರುವುದರಿಂದ ಜಿಲ್ಲೆಗಳಿಂದ ಉಚಿತವಾಗಿ ಆರ್.ಟಿ.ಇ ಅಡಿ ನೀಡಲಾಗಿರುವ ಪಠ್ಯಪುಸ್ತಕಗಳ ಮೊತ್ತವನ್ನು ಕಡಿತಗೊಳಿಸಿ ಉಳಿದಿರುವ ಮೊತ್ತವನ್ನು ಆ ಶಾಲೆಗಳಿಂದ ಪಡೆಯುವ ಬಗ್ಗೆ ಕರ್ನಾಟಕ ಪಠ್ಯಪುಸ್ತಕ ಸಂಘವು ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ. ಅದರಂತೆ ಪುಸ್ತಕ ನೀಡಿ ಕ್ರಮವಹಿಸಲು ಸೂಚಿಸಿದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ

1) ವ್ಯವಸ್ಥಾಪಕ ನಿರ್ದೇಶಕರು. ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ
2) ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3) ರಾಜ್ಯದ ಎಲ್ಲಾ ವಲಯ/ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
4) ರಾಜ್ಯದ ಎಲ್ಲಾ ಅಲ್ಪಸಂಖ್ಯಾತವಲ್ಲದ ಖಾಸಗಿ ಅನುದಾನರಹಿತ ಶಾಲೆಗಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ.

**ಪ್ರತಿಯನ್ನು ಮಾಹಿತಿಗಾಗಿ**

1. ಗೌರಪೂರ್ವಕವಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು – 560001.
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ.
3. ಕಛೇರಿ ಪ್ರತಿ.